# ಮತ್ತೆ ತೆರೆ ಮೇಲೆ 'ದಿಯಾ' ಜೋಡಿ



2020ರಲ್ಲಿ ಬಿಡುಗಡೆಯಾಗಿ ವಿಮರ್ಶೆ, ಕಮರ್ಷಿಯಲ್ ಎರಡು ದಾರಿಯಲ್ಲಿಯೂ ಯಶಸ್ಸಿನ ಗರಿ ಎಳೆದಿದ್ದ 'ದಿಯಾ' ಸಿನಿಮಾದ ಇಬ್ಬರು ನಾಯಕರು ಮತ್ತೆ ತೆರೆ ಮೇಲೆ ಒಂದಾಗಿ ಕಾಣಿಸಿಕೊಳ್ಳುತ್ತಿದ್ದಾರೆ.

ರೊಮ್ಯಾಂಟಿಕ್ ಡ್ರಾಮಾ 'ದಿಯಾ' ಸಿನಿಮಾ ಕಥೆಯಿಂದ ಯಶಸ್ಸು ಪಡೆದಿದ್ದು ಮಾತ್ರವಲ್ಲ, ಸಿನಿಮಾದಲ್ಲಿ ನಟಿಸಿದ್ದ ನಟರ ಕಾರಣವಾಗಿಯೂ ಗಮನಸೆಳೆದಿತ್ತು. ನಟಿ ಖುಷಿ ರವಿ, ದೀಕ್ಷಿತ್ ಶೆಟ್ಟಿ, ಪೃಥ್ವಿ ಅಂಬರ್ ತಮ್ಮ ನಟನೆಯಿಂದ ಪ್ರೇಕ್ಷಕರ ಮನಗೆದ್ದಿದ್ದರು. ಬಹುಭಾಷೆಗಳಲ್ಲಿಯೂ ಸಿನಿಮಾ ಬಿಡುಗಡೆಯಾಗಿತ್ತು. ಕೆ.ಎಸ್. ಅಶೋಕ್ ನಿರ್ದೇಶನದ ಈ ಸಿನಿಮಾದಲ್ಲಿ ಪೃಥ್ವಿ ಅಂಬರ್ ಹಾಗೂ ದೀಕ್ಷಿತ್ ಶೆಟ್ಟಿ ಇಬ್ಬರೂ ನಾಯಕರಾಗಿದ್ದರು. ಈ ಮೂವರ ಕಾಂಬಿನೇಷನ್‌ನಲ್ಲಿ ಈಗ ಮತ್ತೊಂದು ಹೊಸ ಸಿನಿಮಾ ಮೂಡಿಬರುತ್ತಿದೆ.



ಸಂಕೀರ್ಣ ಕಥೆಗಳಿಗೆ ಹೆಸರಾಗಿರುವ, ಮನುಷ್ಯರ ಭಾವನೆಗಳನ್ನು ಎಕ್ಸ್‌ಪ್ಲೋರ್ ಮಾಡುವ ಕೆ.ಎಸ್. ಅಶೋಕ್ ಮತ್ತೊಂದು ಚಿತ್ರ ತಯಾರಿಯಲ್ಲಿದ್ದು, ಹಳ್ಳಿಯಲ್ಲಿನ ಸಾಮಾಜಿಕ ಕಥೆಯನ್ನೊಳಗೊಂಡ ಸಿನಿಮಾ ಮಾಡುತ್ತಿದ್ದಾರೆ. ಸ್ನೇಹ, ಪ್ರೀತಿ ಹಾಗೂ ಬದುಕಿನ ಅನಿರೀಕ್ಷಿತ ತಿರುವುಗಳ ಕಥೆ ಹೇಳುವ ಸಿನಿಮಾದಲ್ಲಿ ಈ ಇಬ್ಬರು ನಾಯಕರು ನಟಿಸುತ್ತಿರುವುದಾಗಿ ತಿಳಿದುಬಂದಿದೆ.

ಸಲಗ ಸಿನಿಮಾದಲ್ಲಿ ನಟಿಸಿದ್ದ ಶ್ರೀಧರ್ ಎಚ್. ಕೃಷ್ಣ ಕೂಡ ಅಭಿನಯಿಸುತ್ತಿದ್ದಾರೆ. ಕಿರುತೆರೆ ನಟಿ ದೇವಿಕಾ ಭಟ್ ಅವರನ್ನು ಅಶೋಕ್ ಈ ಸಿನಿಮಾ ಮೂಲಕ ಪರಿಚಯಿಸುತ್ತಿದ್ದಾರೆ.

ದೀಕ್ಷಿತ್ ಶೆಟ್ಟಿ ತಮಿಳು, ತೆಲುಗು ಸಿನಿಮಾರಂಗದಲ್ಲಿ ಬ್ಯುಸಿಯಾಗಿದ್ದರೆ, ಪೃಥ್ವಿ ಹಲವು ಪ್ರಾಜೆಕ್ಟ್‌ನಲ್ಲಿ ತೊಡಗಿಕೊಂಡಿದ್ದಾರೆ. 'ದಿಯಾ' ಸಿನಿಮಾ ಮ್ಯಾಜಿಕ್ ಮತ್ತೆ ನಡೆಯುವುದೇ ಕಾದುನೋಡಬೇಕಿದೆ. ■




ನಿಲ್ಲಿಸುವುದಿಲ್ಲ ಎಂಬುದು ಅರ್ಥವಾಯಿತು' ಎಂದು ಹೇಳಿದ್ದಾರೆ.

'ಯಾವುದೇ ಸಿನಿಮಾ ಗೆಲುವು ಅದರಲ್ಲಿನ ಹಲವರ ಪರಿಶ್ರಮವಾಗಿರುತ್ತದೆ. ಯಾವುದೇ ವ್ಯಕ್ತಿ ಒಬ್ಬನೇ ಗೆಲ್ಲಲು ಸಾಧ್ಯವಿಲ್ಲ. ಯಾರೇ ಆದರೂ ದೊಡ್ಡ ಗುರಿಯೊಂದಿಗೆ ಕೆಲಸ ಮಾಡಬೇಕು. ಜವಾಬ್ದಾರಿಯಿಂದ ಮುಂದಡಿ ಇಡಬೇಕು. ಆಗ ಯಶಸ್ಸು ಸಿಕ್ಕೇ ಸಿಗುತ್ತದೆ' ಎಂದಿದ್ದಾರೆ.

'ಸಿನಿಮಾರಂಗಕ್ಕೆ ಹೊಸಬರು ಬರುತ್ತಲೇ ಇರಬೇಕು' ಎಂದಿರುವ ಯಶ್, 'ಪ್ರೇಕ್ಷಕರು ಪ್ರತಿ ಬಾರಿ ನನ್ನ ಹೆಸರು ಹೇಳುವುದೇ ನನಗೆ ಶಕ್ತಿ. ಅದು ನನ್ನ ಜವಾಬ್ದಾರಿಯನ್ನು ಹೆಚ್ಚಿಸುತ್ತಲೇ ಇದೆ. ನಾನು ನಿಮ್ಮ ನಂಬಿಕೆಯನ್ನು ಎಂದಿಗೂ ಕಳೆದುಕೊಳ್ಳುವುದಿಲ್ಲ' ಎಂದು ಭರವಸೆ ನೀಡಿದ್ದಾರೆ.

ಸದ್ಯ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾ ಚಿತ್ರೀಕರಣ ಭರದಿಂದ ಸಾಗುತ್ತಿದ್ದು, ಸಿನಿಮಾ ಬಗ್ಗೆ ಅಭಿಮಾನಿಗಳಲ್ಲಿ ನಿರೀಕ್ಷೆಗಳು ಗರಿಗೆದರಿವೆ. ■




# ಒಟಿಟಿಯಲ್ಲಿ 'ತಾಯಿ ಕಸ್ತೂರ್ ಗಾಂಧಿ'

ಬರಗೂರು ರಾಮಚಂದ್ರಪ್ಪನವರು ನಿರ್ದೇಶಿಸಿರುವ ಜನಮಿತ್ರ ಮೂವೀಸ್ ನಿರ್ಮಾಣದ 'ತಾಯಿ ಕಸ್ತೂರ್ ಗಾಂಧಿ' ಕನ್ನಡ ಚಿತ್ರ ಒಟಿಟಿಯಲ್ಲಿ ಬಿಡುಗಡೆಗೊಂಡಿದೆ. ಮಾರ್ಚ್ 28ರಂದು ಅಮೆಜಾನ್ ಪ್ರೈಮ್‌ನಲ್ಲಿ ಸಿನಿಮಾ ಬಿಡುಗಡೆಯಾಗಿದೆ.

ಬರಗೂರರ ಕಾದಂಬರಿಯನ್ನು ಆಧರಿಸಿ ಈ ಚಿತ್ರ ನಿರ್ಮಾಣಗೊಂಡಿದೆ.

ನಮ್ಮ ದೇಶದಲ್ಲಿ ಕಸ್ತೂರ್ ಬಾ ಅವರನ್ನೇ ಕೇಂದ್ರವಾಗಿಟ್ಟುಕೊಂಡು ನಿರ್ಮಾಣವಾದ ಮೊದಲ ಚಿತ್ರವೆಂಬ ಹೆಗ್ಗಳಿಕೆಗೂ ಇದು ಪಾತ್ರವಾಗಿದೆ. ಕಸ್ತೂರ್ ಬಾ ಅವರ ಬದುಕಿನ ಕೆಲವು ಪ್ರಮುಖ ಘಟನೆಗಳ ಮೂಲಕ ಆದರ್ಶ ಮತ್ತು ಕಟುವಾಸ್ತವಗಳ ಕಥನವನ್ನು ಈ ಚಿತ್ರದಲ್ಲಿ ಕಟ್ಟಿಕೊಡಲಾಗಿದೆ. ಬದುಕಿನ ದ್ವಂದ್ವಗಳನ್ನು ಎದುರಿಸುತ್ತಲೇ ಅದನ್ನು ಮೀರುವ ವ್ಯಕ್ತಿತ್ವಗಳಾಗಿ ಕಸ್ತೂರ್ ಬಾ ಮತ್ತು ಗಾಂಧೀಜಿಯವರನ್ನು ಚಿತ್ರಿಸಲಾಗಿದೆ. ಕಸ್ತೂರ್ ಬಾ ಅವರು ತಾಯಿ, ಪತ್ನಿ ಮತ್ತು ಹೋರಾಟಗಾರ್ತಿಯಾಗಿ ಬದುಕನ್ನು ನಿಭಾಯಿಸಿದ ಚರಿತೆಯನ್ನು ಈ ಚಿತ್ರವು ಅನಾವರಣಗೊಳಿಸುತ್ತದೆ. ಇದು ಏಕಕಾಲಕ್ಕೆ ಕಸ್ತೂರ್ ಬಾ ಮತ್ತು ಗಾಂಧೀಜಿ ಇಬ್ಬರ ವ್ಯಕ್ತಿತ್ವವನ್ನು ಒಳಗೊಂಡ ಚಿತ್ರವಾಗಿದೆ.

'ತಾಯಿ ಕಸ್ತೂರ್ ಗಾಂಧಿ' ಚಿತ್ರವು ಕೆಲವು ವಿದೇಶಿ ಅಂತರರಾಷ್ಟ್ರೀಯ ಚಿತ್ರೋತ್ಸವಗಳಿಗೆ ಆಯ್ಕೆಯಾಗಿದ್ದು, ಲಾಸ್‌ಏಂಜಲೀಸ್ ಚಿತ್ರೋತ್ಸವದಲ್ಲಿ 'ಉತ್ತಮ ಚಿತ್ರ' ಪ್ರಶಸ್ತಿಗೆ ಭಾಜನವಾಗಿದೆ. ಸುರೇಶ್ ಅರಸು ಅವರಿಗೆ 'ಉತ್ತಮ ಸಂಕಲನಕಾರ' ಪ್ರಶಸ್ತಿಯೂ ಬಂದಿದೆ.

ಕಸ್ತೂರ್ ಬಾ ಪಾತ್ರದಲ್ಲಿ ಹರಿಪ್ರಿಯ ಮತ್ತು ಗಾಂಧಿಯಾಗಿ ಕಿಶೋರ್ ಅಭಿನಯಿಸಿದ್ದಾರೆ. ಶ್ರೀನಾಥ್ ಅವರು ಅಂಬೇಡ್ಕರ್ ಪಾತ್ರದಲ್ಲಿದ್ದಾರೆ. ಮಾಸ್ಟರ್ ಆಕಾಂಕ್ಷ್ ಬರಗೂರು, ಸುಂದರರಾಜು, ಪ್ರಮೀಳಾ ಜೋಷಾಯ್, ರಾಘವ್, ಸುಂದರರಾಜ ಅರಸು, ರೇಖಾ, ವೆಂಕಟರಾಜು, ವತ್ಸಲಾ ಮೋಹನ್, ಕುಮಾರಿ ಸ್ಪಂದನ ಮುಂತಾದವರು ತಾರಾಗಣದಲ್ಲಿದ್ದಾರೆ. ■